ಕರ್ತವ್ಯ ನಿರ್ವಹಿಸುತ್ತಾರೆ. ಆದ್ದರಿಂದ ಅವರಿಗೆ ತಾಲ್ಲೂಕು ಪಂಚಾಯಿತಿ ಸಮಿತಿ ಕಚೇರಿಯಲ್ಲಿ ಪ್ರತ್ಯೇಕವಾಗಿ ಕಚೇರಿ ಕೊಠಡಿಗಳನ್ನು ಮಂಜೂರು ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ನೇಮಕವಾಗುವ ಓಂಬುಡ್ಸ್‌ಮನ್‌ಗಳಿಗೆ ಜಿಲ್ಲಾ ಪಂಚಾಯತಿ ಕಛೇರಿಯಲ್ಲಿ ಸ್ಥಳಾವಕಾಶ ಕಲ್ಪಿಸಲು ಕ್ರಮ ವಹಿಸಲಾಗಿದೆ.

(ಆ) ಓಂಬುಡ್ಸ್‌ಮನ್‌ಗಳ ಕಛೇರಿಯ ಆಡಳಿತ ವೆಚ್ಚಕ್ಕೆ ತಗಲುವ ವೆಚ್ಚವನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಶೇಕಡಾ 6 ಆಡಳಿತ ವೆಚ್ಚದಲ್ಲಿ ಒದಗಿಸಲಾಗಿದೆ.

ಕೂಲಿ ಕಾರ್ಮಿಕರಿಗೆ ಇ.ಎಸ್.ಐ ಮತ್ತು ಪಿ.ಎಫ್. ಸೌಲಭ್ಯ ನೀಡುವುದು

412 (502) ಶ್ರೀ ಬಂಡೆಪ್ಪ ಕಾಶೆಂಪೂರ್(ಬೀದರ್ ದಕ್ಷಿಣ) ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಎನ್.ಆರ್.ಇ.ಜಿ.ಎಸ್. ಸ್ಕೀಮ್‌ನಲ್ಲಿ ಮಾಡುತ್ತಿರುವ ಗ್ರಾಮೀಣ ಕೂಲಿ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳಾವುವು (ವಿವರ ನೀಡುವುದು);

(ಆ) ಈ ಕೂಲಿ ಕಾರ್ಮಿಕರುಗಳಿಗೆ ಇ.ಎಸ್.ಐ ಮತ್ತು ಪಿ.ಎಫ್ ಸೌಲಭ್ಯವನ್ನು ನೀಡಲಾತ್ತಿದೆಯೇ;

(ಇ) ಹಾಗಿದ್ದಲ್ಲಿ, ಇದಕ್ಕೆ ರಾಜ್ಯದ ಮತ್ತು ಕೇಂದ್ರ ಸರ್ಕಾರದ ಪಾಲೆಷ್ಟು;

(ಈ) ಇವರುಗಳಿಗೆ ವಿಮಾ ಪಾಲಿಸಿ ಯೋಜನೆಯನ್ನು ಸರ್ಕಾರದ ವತಿಯಿಂದ ದೊರಕಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

(ಉ) ಹಾಗಿದ್ದಲ್ಲಿ, ಎಂದು ದೊರಕಿಸಿಕೊಡಲಾಗುವುದು (ವಿವರ ನೀಡುವುದು)?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು):–

(ಅ) ಕಾಮಗಾರಿ ನಡೆಯುವ ಸ್ಥಳದಲ್ಲಿ, ಶುದ್ಧ ಕುಡಿಯುವ ನೀರು, ಕೂಲಿಕಾರರ ಮತ್ತು ಮಕ್ಕಳ ವಿಶ್ರಾಂತಿಗಾಗಿ ನೆರಳು, ಕೆಲಸ ಮಾಡುವ ಸಮಯದಲ್ಲಿ ಆಗಬಹುದಾದ ಸಣ್ಣ ಪುಟ್ಟ ಗಾಯಗಳು, ಇತ್ಯಾದಿಗಳ ಪ್ರಥಮ ಚಿಕಿತ್ಸೆಗಾಗಿ ಪ್ರಥಮ ಚಿಕಿತ್ಸೆ ಪೆಟ್ಟಿಗೆ ಮತ್ತು 6 ವರ್ಷಕ್ಕಿಂತ ಕಡಿಮೆ ಇರುವ ಐದಕ್ಕಿಂತ ಹೆಚ್ಚಿನ ಮಕ್ಕಳು ಕಾರ್ಮಿಕರೊಂದಿಗೆ ಬಂದಲ್ಲಿ, ಅವರನ್ನು ನೋಡಿಕೊಳ್ಳಲು ಓರ್ವ ಮಹಿಳೆಯನ್ನು ನೇಮಕ ಮಾಡುವುದು, ಕಾಮಗಾರಿಯ ಸ್ಥಳದಲ್ಲಿ ಕಾಮಗಾರಿಗೆ ಸಂಬಂಧಿಸಿದಂತೆ ಕಾರ್ಮಿಕರಿಗೆ ಗಾಯಗಳಾದಲ್ಲಿ

ಉಚಿತ ವೈದ್ಯಕೀಯ ಚಿಕಿತ್ಸೆ ನೀಡುವುದು ಮತ್ತು ಕಾಮಗಾರಿಯ ಕಾರಣದಿಂದ ಕಾರ್ಮಿಕರು ಶಾಶ್ವತವಾಗಿ ಅಂಗವಿಕಲರಾದರೆ ಅಥವಾ ಮೃತಪಟ್ಟರೆ ಸಂದರ್ಭಕ್ಕೆ ತಕ್ಕಂತೆ ಅವರಿಗೆ ಅಥವಾ ಅವರ ವಾರಸುದಾರರಿಗೆ ರೂ. 25,000/- ಗಳನ್ನು ಅನುಗ್ರಹ ಧನವಾಗಿ ನೀಡುವ ಈ ಸೌಲಭ್ಯಗಳನ್ನು ಅಧಿನಿಯಮದಡಿ ಕಲ್ಪಿಸಿರುತ್ತದೆ.

(ಆ) ಇಲ್ಲ.

(ಇ) ಉದ್ಭವಿಸುವುದಿಲ್ಲ.

(ಈ) ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಕೂಲಿ ಕಾರ್ಮಿಕರ ಕುಟುಂಬಗಳಿಗೆ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯ ಆರೋಗ್ಯ ವಿಮೆಯನ್ನು ಕಾರ್ಮಿಕ ಇಲಾಖೆ ಮತು ಗ್ರಾಮೀಣ ಭೂರಹಿತ ಕುಟುಂಬಗಳ ಕಾರ್ಮಿಕರಿಗೆ ಅಮ್ ಆದ್ಮಿ ಭೀಮಾ ಯೋಜನೆಯಡಿ ಸಾಮಾನ್ಯ ವಿಮೆಯನ್ನು ಕಂದಾಯ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿದೆ. ಕೇಂದ್ರ ಸರ್ಕಾರದ ನಿರ್ದೇಶನದಂತೆ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ನೋಂದಾಯಿತ ಎಲ್ಲಾ ವರ್ಗದ ಕೂಲಿ ಕಾರ್ಮಿಕರ ಕುಟುಂಬಗಳಿಗೆ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯ ಆರೋಗ್ಯ ವಿಮೆಯನ್ನು ವಿಸ್ತರಿಸಲು ರಾಜ್ಯ ಸರ್ಕಾರವು ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.

(ಉ) ಉದ್ಭವಿಸುವುದಿಲ್ಲ.

ಎನ್.ಆರ್.ಇ.ಜಿ. ಯೋಜನೆ ಅನುಷ್ಠಾನ

416 (95) ಡಾ:ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಇಂಡಿ ತಾಲ್ಲೂಕಿನ ನಂದರಗಿ ಗ್ರಾಮ ಪಂಚಾಯತ್‌ನ ವ್ಯಾಪ್ತಿಯಲ್ಲಿ ಎನ್.ಆರ್.ಇ.ಜಿ.ಎಸ್. ಯೋಜನೆ ಅನುಷ್ಠಾನದಲ್ಲಿ ನಡೆದ ಭ್ರಷ್ಟಾಚಾರ ಸರ್ಕಾರದ ಗಮಮನಕ್ಕೆ ಬಂದಿದೆಯೇ:

(ಆ) ಈ ಹಣ ದುರುಪಯೋಗದ ತನಿಖೆಗೆ ನಿಯೋಜಕರಾದ ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪುರ ಇವರು ಸಕಾರಣವಿಲ್ಲದೆ ವಿಚಾರಣೆಯನ್ನು ಸಾವಧಾನವಾಗಿ ನಡೆಸುತ್ತಾ ಮತ್ತು ಮುಂದೂಡುತ್ತಾ ಆಪಾದಿತರಿಗೆ ರಕ್ಷಣೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ ಮುಖ್ಯ ಯೋಜನಾಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಜರುಗಿಸುತ್ತದೆ;